# ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.

**ಉಪಸ್ಥಿತರುಃ- ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

## ಸಿ.ಸಿ. ನಂಃ 23/2025

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಸೈದಾಪೂರ ಪೋಲಿಸ್ ಠಾಣೆ**

**// ವಿರುದ್ದ //**

**ಆರೋಪಿ ಃ ವಿರೇಶ ಮತ್ತು ಇತರರು.**

## ದೋಷಾರೋಪಣೆ

ನಾನುಃ **ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ** ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ ಆದ ನಾನು ಆರೋಪಿಗಳಾದ

1. ವಿರೇಶ @ ವಿರೂಪಾಕ್ಷಪ್ಪ ತಂದೆ ಮಲ್ಲಿಕಾರ್ಜುನ,
2. ರಘು @ ರಾಘವೆಂದ್ರ ತಂದೆ ಯಂಕಪ್ಪ,
3. ಗುರು @ ಗುರುಮಹೇಂದ್ರ ತಂದೆ ತಿರುಮಲರಾವ ಲಕ್ಷಂಪೂರ,
4. ಭೀಮೇಶ @ ಭೀಮರಾವ ತಂದೆ ಬಸವರಾಜ.

## <u>ನಿಮ್ಮ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ</u>,

ದಿನಾಂಕ 17.09.2024 ರಂದು ಬೆಃ 09.30 ಗಂಟೆ ಸುಮಾರಿಗೆ ಕಡೇಚೂರು ಕೈಗಾರಿಕಾ ಪ್ರದೇಶದ ಶ್ರೀವೆನ್ ಫಾರ್ಮಾಕೆಮ ಫ್ಯಾಕ್ಟರಿ ಗೇಟ್ ಹತ್ತಿರ ಚಾಸಾಃ1 ರವರು ತಮ್ಮ ಕಂಪನಿಯಲ್ಲಿ ಇದ್ದಾಗ ಆರೋಪಿತರಾದ ನೀವು ಕಂಪನಿಯೊಳಗೆ ನುಗ್ಗಿ ನಿಮ್ಮ ಕಂಪನಿಯ ರಾಜಶೇಖರ ಪೇಮೆಂಟ ಮಾಡದೆ ನಮಗೆ ಮೋಸ ಮಾಡಿದ್ದಾನೆ ಎಂದು

ಅಕ್ರಮವಾಗಿ ಪ್ರವೇಶ ಮಾಡಿದ್ದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.329(4) ಸಹ ಕಲಂ 3(5) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**2.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾದ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಪೈಕಿ 1 ನೇ ಆರೋಪಿಯಾದ ನೀನು ಚಾಸಾಃ1 ರವರಿಗೆ ಅಲ್ಲೇ ಬಿದ್ದಿದ್ದ ಕಲ್ಲಿನಿಂದ ಬೀಸಿ ಹಣೆಗೆ ಹೊಡೆದು ರಕ್ತಗಾಯ ಮಾಡಿದ್ದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.118(1) ಸಹ ಕಲಂ 3(5) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**3.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾದ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ರಿಂದ 4 ನೇ ಆರೋಪಿತರಾದ ನೀವು ಚಾಸಾಃ1 ರವರಿಗೆ ಕೈಯಿಂದ ಮೈ, ಕೈಗೆ ಹೊಟ್ಟೆಗೆ ಹೊಡೆದು ನೆಲಕ್ಕೆ ಹಾಕಿ ಕಾಲಿನಿಂದ ಒದಿದ್ದು, ಈ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.115(2) ಸಹ ಕಲಂ 3(5) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**4.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾದ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಪೈಕಿ 1 ನೇ ಆರೋಪಿಯಾದ ನೀನು ಚಾಸಾಃ1 ರವರಿಗೆ ಏ ರಂಡಿ ಬೋಸಡಿ ಅಂತಾ ಅವಾಚ್ಯ ಶಬ್ದಗಳಿಂದ ಬೈದಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.352 ಸಹ ಕಲಂ 3(5) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**5.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾದ ಮಾಡುವ ಸಮಾನ ಉದ್ದೇಶದಿಂದ ಆರೋಪಿತರಾದ ನೀವು ಚಾಸಾಃ1 ರವರಿಗೆ ಯಾರಾದರೂ ನಮಗೆ ಎದುರು ಹಾಕಿಕೊಂಡರೆ ನಿಮಗೆ ಜೀವ ಸಹಿತ ಬಿಡುವುದಿಲ್ಲ ಅಂತಾ ಜೀವ ಬೆದರಿಕೆ ಹಾಕಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.351(2) ಸಹ ಕಲಂ 3(5) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ಆರೋಪಿತರಿಗೆ ತಿಳಿಯುವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ 29.07.2025.**
**ಸ್ಥಳಃ ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ**
**ನ್ಯಾಯಾಧೀಶರು ಯಾದಗಿರಿ.**